# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 07.05.2022 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71 |
| 2 | ಜಯಂತ್ ಕುಮಾರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ವೆಂಕಟರಾಜು | ಸದಸ್ಯರು |
| 4 | ನಿಂಗಪ್ಪ | ಸದಸ್ಯರು |
| 5 | ಕೆ ಎ ಉಮೇಶ | ಸದಸ್ಯರು |
| 6 | ಮಂಜುನಾಥ್ ಎ | ಸದಸ್ಯರು |
| 7 | ಮುನಿರಾಜು ಹೆಚ್ ಟಿ | ಸದಸ್ಯರು |
| 8 | ಕೆ ಎಲ್ ಮುರುಳೀಧರ್ | ಕಂದಾಯ ಪರಿವೀಕ್ಷಕರು |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಜಯಂತ್ ಕುಮಾರ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **ವಿಷಯ ಸಂಖ್ಯೆ:1**
  **ಹವಾಮಾನ ಇಲಾಖೆಯಿಂದ ಇನ್ನೂ ಮುಂದಿನ ವಾರದವರೆಗೂ ಇರುವ ಮಳೆಯ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳು:**

ನೋಡಲ್ ಅಧಿಕಾರಿಗಳು ಮಾತನಾಡಿ, ಹವಾಮಾನ ಇಲಾಖೆಯಿಂದ ಮುಂದಿನ ವಾರದವರೆಗೂ ಇರುವ ಮಳೆಯು ಸುರಿಯುವ ಮಾಹಿತಿ ಇರುವುದರಿಂದ ಈ ಬಗ್ಗೆ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲು ಚರ್ಚಿಸಲಾಯಿತು.

ಈ ಬಗ್ಗೆ, ವಾರ್ಡ್ 71ರ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ಹೆಗ್ಗನಹಳ್ಳಿ ಉಪವಿಭಾಗ ವ್ಯಾಪ್ತಿಯ ತಾತ್ಕಾಲಿಕ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಲಾಗಿದ್ದು, ಅಗತ್ಯ ಸಲಕರಣೆಗಳೊಂದಿಗೆ ಮಳೆಯಿಂದಾಗಿ ಉಂಟಾಗುವ ಸಮಸ್ಯೆಗಳನ್ನು ಪರಿಹರಿಸಲು ದಿನವೂ ಇಬ್ಬರೂ ನೀರು ಸರಬರಾಜು ಸಹಾಯಕರನ್ನು ನಿಯೋಜಿಸಲಾಗಿರುವುದಾಗೀ ಸಭೆಯಲ್ಲಿ ತಿಳಿಸಿದರು.

ಮುಂದುವರೆದು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ದಿನವೂ ಆದ್ಯತೆಯ ಮೇರೆಗೆ ಚರಂಡಿಗಳಲ್ಲಿನ ಹೂಳು ತೆಗೆಯಲು ಕ್ರಮವಹಿಸಲಾಗುತ್ತಿದೆ ಎಂದು ತಿಳಿಸಿದರು.

- **ವಿಷಯ ಸಂಖ್ಯೆ:2 :-** **ಅನಧಿಕೃತ ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಅನಧಿಕೃತ ಕಟ್ಟಡಗಳನ್ನು ಸರ್ವೇ ಮಾಡಿ ತಿಳುವಳಿಕೆ ಪತ್ರಗಳನ್ನು ನೀಡಲು ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿರವರು ಆದೇಶ ನೀಡಿದ್ದು, ಅದರಂತೆ ಕಂದಾಯ ಅಧಿಕಾರಗಳ ಸಹಕಾರದೊಂದಿಗೆ ವಾರ್ಡ್ 71ರ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಿಸಿರುವ/ ನಿರ್ಮಿಸುತ್ತಿರು Category-1 & 2 ಕಟ್ಟಡಗಳಿಗೆ 313, ಪಿ.ಓ & ಸಿ.ಓ ನೋಟೀಸ್ ಜಾರಿ ಮಾಡುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ತಿಳಿಸಿದರು.

ಇದಕ್ಕೆ ಸಹಾಯಕ ಅಭಿಯಂತರರು ಪ್ರತಿಕ್ರಿಯಿಸಿ ದಿನನಿತ್ಯದ ಕೆಲಸ ಕಾರ್ಯಗಳ ಒತ್ತಡದ ನಡುವೆಯೂ ಪ್ರತಿನಿತ್ಯವೂ 313, ತಾತ್ಕಾಲಿಕ ಆದೇಶ & ಸ್ಥಿರೀಕರಣ ಆದೇಶಗಳ ನೋಟೀಸ್ ಗಳನ್ನು ಜಾರಿ ಮಾಡಲಾಗುತ್ತಿದೆ ಎಂದು ತಿಳಿಸಿದರು.

**ವಿಷಯ ಸಂಖ್ಯೆ: 3:-** **ಬೀದಿದೀಪಗಳ ಅಸಮರ್ಪಕ ನಿರ್ವಹಣೆ**

ವಾರ್ಡ್ 71ರ ವ್ಯಾಪ್ತಿಯಲ್ಲಿ ಬೀದಿದೀಪಗಳ ನಿರ್ವಹಣೆಯನ್ನು ಪಡೆದಿರುವ ಗುತ್ತಿಗೆದಾರರು ಸಾರ್ವಜನಿಕರಿಗೆ ದೂರವಾಣಿ ಮೂಲಕ ಸ್ಪಂದಿಸುತ್ತಿಲ್ಲವೆಂದು ಹಾಜರಿದ್ದ ಸದಸ್ಯರು ದೂರಿದರು.

ಇದಕ್ಕೆ ನೋಡಲ್ ಅಧಿಕಾರಿಗಳು ಪ್ರತಿಕ್ರಿಯಿಸಿ, ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರಿಗೆ ಕರೆ ಮಾಡಿ ಸಾರ್ವಜನಿಕ ದೂರುಗಳಿಗೆ ಸ್ಪಂದಿಸಲು ದೂರವಾಣಿ ಮೂಲಕ ತಿಳಿಸಿದರು.

**ವಿಷಯ ಸಂಖ್ಯೆ: 4:-** **ಕಂದಾಯ ಪಾವತಿಸಲು ನೀಡಿದ್ದ 5% ರಿಯಾಯಿತಿ ಗಡುವನ್ನು ವಿಸ್ತರಿಸಿರುವುದರ ಬಗ್ಗೆ**

ಶ್ರೀ ವೆಂಕಟರಾಜು, ಸದಸ್ಯರು ಮಾತನಡಿ ಹಿಂದಿನ ಸಭೆಯಲ್ಲಿ ಕೋರಿದಂತೆ, ಸ್ಪಂದಿಸಿ ಕಂದಾಯ ಪಾವತಿಸಲು ನೀಡಿದ್ದ 5% ರಿಯಾಯಿತಿ ಗಡುವನ್ನು ವಿಸ್ತರಿಸಿರುವುದಕ್ಕಾಗಿ ವಂದನೆಗಳನ್ನು ತಿಳಿಸಿದರು

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➤ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಜಯಂತ್ ಕುಮಾರ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ 71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ